ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 3026 (2529)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು: ಕಂದಾಯ ಸಚಿವರು

ವಿಷಯ : ನಮೂನೆ 50, 53, 57, 94ಸಿ ಯಲ್ಲಿ ಸಲ್ಲಿಸಿದ ಅರ್ಜಿಗಳ ಕುರಿತು

(ಅ) ಉಡುಪಿ ಜಿಲ್ಲೆಯ ಕುಂದಾಪುರ ಹಾಗೂ ಬ್ರಹ್ಮಾವರ ತಾಲ್ಲೂಕಿನಲ್ಲಿ ನಮೂನೆ 50, 53 ರಲ್ಲಿ ರೈತರಿಂದ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಸಮಿತಿಯಲ್ಲಿ ಮಂಜೂರಾತಿ ನೀಡಿದ ಅರ್ಜಿಗಳ ಸಂಖ್ಯೆ ಎಷ್ಟು ; ಸಮಿತಿಯಲ್ಲಿ ಮಂಜೂರಾತಿ ನೀಡಿ ಹಕ್ಕುಪತ್ರ ನೀಡದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ವಿಚಾರಣೆಯ ಹಂತದಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ತಿರಸ್ಕೃತವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಆ) ಕುಂದಾಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 94ಸಿ ಮತ್ತು 94ಸಿಸಿ ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಮಂಜೂರಾತಿ ನೀಡಿದ ಅರ್ಜಿಗಳ ಸಂಖ್ಯೆ ಎಷ್ಟು ; ವಿಚಾರಣೆಯ ಹಂತದಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ತಿರಸ್ಕೃತವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಇ) ಉಡುಪಿ ಜಿಲ್ಲೆಯ ಕುಂದಾಪುರ ಹಾಗೂ ಬ್ರಹ್ಮಾವರ ತಾಲ್ಲೂಕಿನಲ್ಲಿ ನಮೂನೆ 57ರಲ್ಲಿ ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; ಮಂಜೂರಾತಿಯಾದ ಅರ್ಜಿಗಳ ಸಂಖ್ಯೆ ಎಷ್ಟು ; ತಿರಸ್ಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ?